ಕುವೆಂಪು ವಿಶ್ವವಿದ್ಯಾಲಯದ ಮೌಲ್ಯಮಾಪನ ದುರ್ವ್ಯವಹಾರ

3395 - ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಈ ವರ್ಷ ಕುವೆಂಪು ವಿಶ್ವವಿದ್ಯಾಲಯದ ಮೌಲ್ಯಮಾಪನದಲ್ಲಾದ ದುರ್ವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೆ?*

ಆ) *ಬಂದಿದ್ದಲ್ಲಿ ಆ ಬಗ್ಗೆ ಏನು ಕ್ರಮ ತೆಗೆದುಕೊಳ್ಳಲಾಗಿದೆ.?*

ಇ) *ಆ ಬಗ್ಗೆ ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ದ.ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ವಿದ್ಯುತ್ ಬಳಕೆದಾರರ ಸಹಕಾರ ಸಂಘ

3368 - ಶ್ರೀ ಬಿ. ರಮಾನಾಥ ರೈ (ಬಂಟ್ವಾಳ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದಲ್ಲಿ ಪುಕ್ಕೇರಿ ತಾಲ್ಲೋಕಿನ ಮಾದರಿಯ ವಿದ್ಯುತ್ ಬಳಕೆದಾರರಲ್ಲಿ ಸಹಕಾರ ಸಂಘ ಸ್ಥಾಪಿಸುವ ವಿಚಾರ ಯಾವ ಹಂತದಲ್ಲಿದೆ*

ಆ) *ಇದನ್ನು ಪ್ರಾರಂಭಿಸಲು ಸರ್ಕಾರ ಯೋಚಿಸಿದೆಯೇ?*

ಶ್ರೀ ಎಸ್. ಆರ್. ಮೋರೆ (ಸಹಕಾರ ರಾಜ್ಯ ಸಚಿವರು) :

ಗ್ರಾಮೀಣ ವಿದ್ಯುದ್ದೀಕರಣ ನಿಗಮ ನವ ದೆಹಲಿ ಇವರಿಂದ ಈ ಸಂಘದ ಯೋಜನೆಗೆ ಮಂಜೂರಾತಿ ನಿರೀಕ್ಷಿಸಲಾಗುತ್ತಿದೆ.

ನೆಲಮಂಗಲ ಕ್ಷೇತ್ರಕ್ಕೆ ಸೇರಿದ ಪ್ರಾಥಮಿಕ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆ

3272 - ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವೆ?

ಅ) *ನೆಲಮಂಗಲ ವಿಧಾನ ಸಭಾ ಕ್ಷೇತ್ರಕ್ಕೆ ಸೇರಿದ ಪ್ರಾಥಮಿಕ (ಹಿರಿಯ ಮತ್ತು ಕಿರಿಯ ಪಾಠಶಾಲೆಗಳಲ್ಲಿ ಹಾಗೂ ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಅಲ್ಲಿನ ಒಟ್ಟು ಶಿಕ್ಷಕರ ಸಂಖ್ಯೆ ಎಷ್ಟು ಹಾಗೂ ತುಂಬ ಬೇಕಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು?*

ಇ) *ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಖಾಲಿ ಇರುವ ಹುದ್ದೆಗಳಿಗೆ ಶಿಕ್ಷಕರನ್ನು ನೇಮಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?*

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಳ ಸಚಿವರು):

ಅ) ಹೌದು.